**ಸಾಕ್ಷಿಯನ್ನು ನ್ಯಾಯಾಲಯದ ಆದೇಶದ ಮೇರೆಗೆ ದಿನಾಂಕಃ 05-08-2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರವಾಗಿ ಶ್ರೀ ಬಿ.ಆರ್.ಪಿ ವಕೀಲರಿಂದಃ**

ಈ ದಾವೆಗೆ ಪೂರಕವಾಗಿ ಮತ್ತು ಹೆಚ್ಚುವರಿಯಾಗಿ ಹಾಗೂ ಪ್ರತಿವಾದಿ ಪರ ವಕೀಲರ ಸೂಚನಾವಳಿಯಂತೆ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–11 | ದಿನಾಂಕ 21.06.1992 ರ ನೊಂದಾಯಿತ ಟ್ರಸ್ಟ್ ಡಿಡ್ ನ ದೃಢಿಕೃತ ನಕಲು |
| ನಿ.ಪಿ.–12 | ಋಣಭಾರ ಪ್ರಮಾಣ ಪತ್ರ |
| ನಿ.ಪಿ.–13 ಮತ್ತು 14 | ತೆರಿಗೆ ವಸೂಲು ರಿಜೇಸ್ಟರ್ |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿಯ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**